ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಬಸವ ವಸತಿ ಯೋಜನೆಯಡಿ ಮನೆಗಳ ಹಂಚಿಕೆ ಕುರಿತು

ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

1148 (1160) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) 2018-19 ಮತ್ತು 2019-20ನೇ ಸಾಲಿನಲ್ಲಿ ಬಸವ ವಸತಿ ಯೋಜನೆಯಡಿ ಮನೆ ಹಂಚಿಕೆ ಮಾಡದೇ ಇರುವುದರಿಂದ ನಿವೇಶನ/ಮನೆ ರಹಿತ ಫಲಾನುಭವಿಗಳು ವಸತಿ ಸೌಲಭ್ಯದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಬಸವ ವಸತಿ ಯೋಜನೆಯಡಿ 2018-19 ಮತ್ತು 2019-20ನೇ ಸಾಲಿನಲ್ಲಿ ನಿವೇಶನ/ಮನೆ ಹಂಚಿಕೆ ಆಗದಿರಲು ಕಾರಣವೇನು;

(ಇ) ಅರ್ಹ ಫಲಾನುಭವಿಗಳಿಗೆ ನಿವೇಶನ/ಮನೆ ಹಂಚಿಕೆಗಾಗಿ ಸರ್ಕಾರವು ಕ್ರಮ ಕೈಗೊಳ್ಳುವುದೇ?